ಅನುಬಂಧ III

ಕರ್ನಾಟಕ ವಿಧಾನಸಭೆ

ಒಂಭತ್ತನೆಯ ವಿಧಾನಸಭೆ

(ಎಂಟನೆಯ ಅಧಿವೇಶನ)

ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಒಕ್ಕಲೆಬ್ಬಿಸುವ (ತಿದ್ದುಪಡಿ) ವಿಧೇಯಕ, 1992

(1992ರ ವಿಧಾನಸಭಾ ವಿಧೇಯಕ ಸಂಖ್ಯೆ 32)

ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಒಕ್ಕಲೆಬ್ಬಿಸುವ ಅಧಿನಿಯಮ, 1974ನ್ನು ಮತ್ತಷ್ಟು ತಿದ್ದುಪಡಿ ಮಾಡಲು ವಿಧೇಯಕ,

ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಒಕ್ಕಲೆಬ್ಬಿಸುವ) ಅಧಿನಿಯಮ, 1974 (1974ರ ಕರ್ನಾಟಕ ಅಧಿನಿಯಮ ಸಂಖ್ಯೆ 32)ನ್ನು ಇದರಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ ;

ಭಾರತ ಗಣರಾಜ್ಯದ ನಲವತ್ತಮೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ :

1. ಚಿಕ್ಕ ಹೆಸರು ಮತ್ತು ಪ್ರಾರಂಭ : (1) ಈ ಅಧಿನಿಯಮವನ್ನು ಕರ್ನಾಟಕ ಸಾರ್ವಜನಿಕ ಆವರಣಗಳ ಅನಧಿಕೃತ ಅಧಿಭೋಗದಾರರನ್ನು ಒಕ್ಕಲೆಬ್ಬಿಸುವ (ತಿದ್ದುಪಡಿ) ಅಧಿನಿಯಮ. 1992 ಎಂದು ಕರೆಯತಕ್ಕುದು.

2. 2ನೇ ಪ್ರಕರಣದ ತಿದ್ದುಪಡಿ : ಕರ್ನಾಟಕ ಸಾರ್ವಜನಿಕ ಆವರಣ (ಅನಧಿಕೃತ ನಿವಾಸಿಗಳನ್ನು ಒಕ್ಕಲೆಬ್ಬಿಸುವ) ಅಧಿನಿಯಮ, 1974 (1974ರ ಕರ್ನಾಟಕ ಅಧಿನಿಯಮ ಸಂಖ್ಯೆ 32) (ಇದರಲ್ಲಿ ಇನ್ನು ಮುಂದೆ ಮೂಲ ಅಧಿನಿಯಮವೆಂದು ಕರೆಯಲಾಗುವ) 2ನೇ ಪ್ರಕರಣದ (ಇ) ಖಂಡದಲ್ಲಿ,

(i) (vi) ನೇ ಉಪಖಂಡವಾದ ತರುವಾಯ ಈ ಮುಂದಿನ ಉಪಖಂಡವನ್ನು ಸೇರಿಸತಕ್ಕುದು, ಎಂದರೆ,

"(vii) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 1976 (1976ರ ಕರ್ನಾಟಕ ಅಧಿನಿಯಮ ಸಂಖ್ಯೆ 28) ಅಥವಾ ಕೃಷಿವಿಜ್ಞಾನ ವಿಶ್ವವಿದ್ಯಾಲಯ ಅಧಿನಿಯಮ, 1963 (1963ರ ಕರ್ನಾಟಕ ಅಧಿನಿಯಮ ಸಂಖ್ಯೆ 22)ರಡಿ ಸ್ಥಾಪಿಸಲಾದ ವಿಶ್ವವಿದ್ಯಾಲಯ" ;

(ii) ವಿವರಣೆಯಲ್ಲಿರುವ ಬಾಬು ಸಂಖ್ಯೆ (ಸಿ), (ಡಿ) ಮತ್ತು (ಇ)ಗಳಿಗೆ ಬದಲಾಗಿ ಈ ಮುಂದಿನ ಬಾಬುಗಳನ್ನು ಪ್ರತಿಯೋಜಿಸತಕ್ಕುದು, ಎಂದರೆ,

(ಸಿ) ಕರ್ನಾಟಕ ಮೇಲಪಟ್ಟು ಸುಧಾರಣಾ ಮಂಡಲಿಗಳು ಅಧಿನಿಯಮ, 1976 (1976ರ ಕರ್ನಾಟಕ ಅಧಿನಿಯಮ ಸಂಖ್ಯೆ 11) ರ ಮೇರೆಗೆ ಸ್ಥಾಪಿತವಾದ

(ಡಿ) ಕರ್ನಾಟಕ ಜಿಲ್ಲಾ ಪರಿಷತ್ತುಗಳು, ತಾಲ್ಲೂಕು ಪಂಚಾಯಿತಿ ಸಮಿತಿಗಳು, ಮಂಡಲ್ ಪಂಚಾಯತಿಗಳು ಮತ್ತು ನ್ಯಾಯ ಪಂಚಾಯತಿಗಳ ಅಧಿನಿಯಮ, 1983 (1985ರ ಕರ್ನಾಟಕ ಅಧಿನಿಯಮ ಸಂಖ್ಯೆ 20)ರ ಮೇರೆಗೆ ಸ್ಥಾಪಿತವಾದ ಜಿಲ್ಲಾ ಪರಿಷತ್ತು ಅಥವಾ ಮಂಡಲ್ ಪಂಚಾಯತಿ ;

(ಇ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 1987 (1987ರ ಕರ್ನಾಟಕ ಅಧಿನಿಯಮ ಸಂಖ್ಯೆ 34)ರ ಮೇರೆಗೆ ರಚಿತವಾದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ;

(ಎಫ್) ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಅಧಿನಿಯಮ, 1987 (1987ರ ಕರ್ನಾಟಕ ಅಧಿನಿಯಮ ಸಂಖ್ಯೆ 34)ರ ಮೇರೆಗೆ ರಚಿತವಾದ ನಗರಾಭಿವೃದ್ಧಿ ಪ್ರಾಧಿಕಾರ

3. 3ನೇ ಪ್ರಕರಣದ ತಿದ್ದುಪಡಿ : ಮೂಲ ಅಧಿನಿಯಮದ 3ನೇ ಪ್ರಕರಣದ (ಎ) ಖಂಡದಲ್ಲಿ ii) ನೇ ಬಾಬಿನಲ್ಲಿ "ಸ್ಥಳೀಯ ಪ್ರಾದಿಕಾರ" ಎಂಬ ಪದಗಳ ತರುವಾಯ "ಅಥವಾ ರಾಜ್ಯ ಸರ್ಕಾರಿ ಸೇವೆಗಳ ಬಿ ಗುಂಪಿನ ಅಧಿಕಾರಿಯ ದರ್ಜೆಗಿಂತ ಕೆಳಗಿನ ದರ್ಜೆಯವನಲ್ಲದಂಥ ಅಧಿಕಾರಿ"ಎಂಬ ಪದಗಳನ್ನು ಸೇರಿಸತಕ್ಕದ್ದು.

4. ನಿರಸನ ಮತ್ತು ಉಳಿಸುವಿಕೆಗಳು : (1) ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರ ಒಕ್ಕಲೆಬ್ಬಿಸುವ ತಿದ್ದುಪಡಿ) ಅಧ್ಯಾದೇಶ, 1992 (1992ರ ಕರ್ನಾಟಕ ಅಧ್ಯಾದೇಶ ಸಂಖ್ಯೆ 14) ಈ ಮೂಲಕ ನಿರಸಿತವಾಗಿದೆ;

(2) ಹಾಗೆ ನಿರಸಿತವಾಗಿದ್ದರೂ, ಸದರಿ ಅಧ್ಯಾದೇಶದ ಮೇರೆಗೆ ಮಾಡಲಾದ ಯಾವುದೇ ಕೃತ್ಯ ಅಥವಾ ಕೈಗೊಳ್ಳಲಾದ ಯಾವುದೇ ಕ್ರಮವನ್ನು ಈ ಅಧಿನಿಯಮದ ಮೂಲಕ ತಿದ್ದುಪಡಿಯಾದಂಥ ಮೂಲ ಅಧಿನಿಯಮದ ಮೇರೆಗೆ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಒಕ್ಕಲೆಬ್ಬಿಸುವ) ಅಧಿನಿಯಮ, 1971ನ್ನು ತಿದ್ದುಪಡಿ ಮಾಡುವ ಮೂಲಕ 'ಸಾರ್ವನಿಜಕ ಆವರಣಗಳು' ಎಂಬ ಪದದ ಅರ್ಥವ್ಯಾಪ್ತಿಯಲ್ಲಿ, ವಿಶ್ವವಿದ್ಯಾಲಯಗಳಿಗೆ ಸೇರಿದ ಮತ್ತು ವಿಶ್ವವಿದ್ಯಾಲಯಗಳ ಮೂಲಕ ಅಥವಾ ಅವುಗಳ ಪರವಾಗಿ ಗುತ್ತಿಗೆಗೆ ತೆಗೆದುಕೊಳ್ಳಲಾದ ಆವರಣಗಳನ್ನು ಒಳಗೊಳ್ಳುವಂತೆ ಮಾಡುವುದು ಮತ್ತು 'ಸ್ಥಳೀಯ ಪ್ರಾಧಿಕಾರ' ಎಂಬ ಪದದ ಅರ್ಥವ್ಯಾಪ್ತಿಯಲ್ಲಿ ಅಭಿವೃದ್ಧಿ ಮಂಡಲಿಗಳು, ಜಿಲ್ಲಾ ಪರಿಷತ್ತುಗಳು, ಮಂಡಲ್ ಪಂಚಾಯಿತಿಗಳು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಮತ್ತು ನಗರಾಭಿವೃದ್ಧಿ ಪ್ರಾಧಿಕಾರಗಳನ್ನು ಒಳಗೊಳ್ಳುವಂತೆ ಮಾಡುವುದು ಅವಶ್ಯವೆಂದು ಪರಿಗಣಿಸಲಾಗಿದೆ.

ಆದೇ ಪ್ರಕಾರ, ಕರ್ನಾಟಕ ಸಾರ್ವಜನಿಕ ಆವರಣಗಳು (ಅನಧಿಕೃತ ಅಧಿಭೋಗದಾರರನ್ನು ಒಕ್ಕಲೆಬ್ಬಿಸುವ) (ತಿದ್ದುಪಡಿ) ಅಧ್ಯಾದೇಶ, 1992ನ್ನು ಪ್ರಖ್ಯಾಪಿಸಲಾಯಿತು.

ಸದರಿ ಅಧ್ಯಾದೇಶಕ್ಕೆ ಬದಲಾಗಿ ಈ ವಿಧೇಯಕವನ್ನು ಮಂಡಿಸಲು ಉದ್ದೇಶಿಸಲಾಗಿದೆ.

ಆದ್ದರಿಂದ ಈ ವಿಧೇಯಕವನ್ನು ಮಂಡಿಸಲಾಗಿದೆ.